**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-೧.**

ಸಂಖ್ಯೆ: ಸಿ4(2)ಜೇಷ್ಠ ಪಟ್ಟಿ 1/2006-07

ದಿನಾಂಕ: 30/04/2007

**ಅಧಿಸೂಚನೆ**

ವಿಷಯ:- ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹ ಶಿಕ್ಷಕರು ತಾತ್ಕಾಲಿಕ ಜೇಷ್ಟತಾ ಪಟ್ಟಿಯನ್ನು ದಿನಾಂಕ **31-12-2006** ರಲ್ಲಿರುವಂತೆ ಪ್ರಕಟಿಸುವ ಬಗ್ಗೆ

ಉಲ್ಲೇಖ:- ಈ ಕಛೇರಿ ಅಧಿಸೂಚನೆ ಸಂಖ್ಯೆ ಸಿ4(2) ಗ್ರೇಡ್-2/ಜೇಷ್ಟತೆ 26/98-99 ದಿನಾಂಕ 06-12-2000

* * * *

ಸಾರ್ವಜನಿಕ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರೌಢ ಶಾಲಾ ಮತ್ತು ತತ್ಸಮಾನ ವೃಂದದ ಹುದ್ದೆಗಳಲ್ಲಿ ನೇಮಕಗೊಂಡು ದಿನಾಂಕ 31-12-1998 ರವರೆಗೆ ಕಾರ್ಯನಿರ್ವಹಿಸುತ್ತಿರುವ ಸಹ ಶಿಕ್ಷಕರು ಅಂತಿಮ ಜೇಷ್ಟತಾಪಟ್ಟಿಯನ್ನು ಉಲ್ಲೇಖದ ಅಧಿಸೂಚನೆಯಲ್ಲಿ ಪ್ರಕಟಿಸಲಾಗಿತ್ತು.

ಈ ಪ್ರಕಟಿತ ಅಂತಿಮ ಜೇಷ್ಟತಾ ಪಟ್ಟಿಯಲ್ಲಿ ಅನೇಕ ಕಾರಣಗಳಿಂದ ಕೆಲವೊಂದು ಶಿಕ್ಷಕರ ಹೆಸರು ಬಿಟ್ಟು ಹೋಗಿರುವುದು, ಶಾಲಾ ವಿಳಾಸದಲ್ಲಿ ಅಪೂರ್ಣ ಮಾಹಿತಿಯಿರುವುದು, ಸೇವೆಗೆ ಸೇರಿದ ದಿನಾಂಕ ಹಾಗೂ ನೇಮಕಾತಿಯಾದ ದಿನಾಂಕದಿಂದ ಸರಿಯಾದ ಮಾಹಿತಿಯಿಲ್ಲದೇ ಇರುವುದು ಮತ್ತು ಹೆಸರು ಬಿಟ್ಟು ಹೋಗಿರುವ ಪ್ರಕರಣಗಳನ್ನು ಜೇಷ್ಟತಾ ಪಟ್ಟಿಯಲ್ಲಿ ಸೇರ್ಪಡೆಗೊಳಿಸಲು ಭಾದಿತ ಶಿಕ್ಷಕರು, ಜಿಲ್ಲಾ ಉಪನಿರ್ದೇಶಕರುಗಳಿಂದ ಪ್ರಸ್ತಾವನೆಗಳು ಮತ್ತು ಪ್ರೌಢ ಶಾಲಾ ಸಹ ಶಿಕ್ಷಕರ ಸಂಘದಿಂದ ಪದೇ ಪದೇ ಮನವಿಗಳು ಈ ಕಛೇರಿಯಲ್ಲಿ ಸ್ವೀಕೃವಾಗಿದ್ದು ಇಂತಹ ಮನವಿಯ ಆಧಾರದ ಮೇಲೆ ಸದರಿ ಪಟ್ಟಿಗೆ ಸಬ್ ನಂಬರ್ ಸಹ ನೀಡಲಾಗಿದೆ.

ಈ ಹಿನ್ನಲೆಯಲ್ಲಿ ಸದರಿ ಪಟ್ಟಿಯಲ್ಲಿನ ನ್ಯೂನತೆಗಳನ್ನು ಸರಿಪಡಿಸಿ ಮತ್ತು ಪರಿಷ್ಕರಿಸುವುದು ತೀರಾ ಅನಿವಾರ್ಯ ಹಾಗೂ ಅಗತ್ಯವೆಂದು ಕಂಡು ಬಂದ ಕಾರಣ, ಸರ್ಕಾರಿ ಪ್ರೌಢ ಶಾಲಾ ಮತ್ತು ತತ್ಸಮಾನ ವೃಂದದ ಹುದ್ದೆಗಳಲ್ಲಿ ನೇಮಕಗೊಂಡು ದಿನಾಂಕ 31-12-2006 ರವರೆಗೆ ಕಾರ್ಯನಿರ್ವಹಿಸುತ್ತಿರುವ ಸಹ ಶಿಕ್ಷಕರ ಅಂತಿಮ ಜೇಷ್ಟತಾಪಟ್ಟಿಯನ್ನು ಸಿದ್ಧಪಡಿಸಲು ರಾಜ್ಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಂದ ಪಡೆದಿರುವ ಮಾಹಿತಿಯನ್ನು ಆಧರಿಸಿ ಕ್ರೂಢೀಕರಿಸಿ ಗಣಕೀಕರಣಗೊಳಿಸಿದ ಪ್ರೌಢ ಶಾಲಾ ಸಹ ಶಿಕ್ಷಕರ ತಾತ್ಕಾಲಿಕ ಜೇಷ್ಟತಾ ಪಟ್ಟಿಯನ್ನು ದಿನಾಂಕ 30-04-2007 ರಂದು ಪ್ರಕಟಿಸಲಾಗಿದೆ. ಈ ಜೇಷ್ಟತಾ ಪಟ್ಟಿಯನ್ನು ಶಿಕ್ಷಕರು ಗ್ರೇಡ್-2 ಬಂದ ದಿನಾಂಕ ಆಧಾರದ ಮೇಲೆ ಸಿದ್ಧಪಡಿಸಲಾಗಿದೆ.

ಈ. ತಾತ್ಕಾಲಿಕ ಜೇಷ್ಟತಾ ಪಟ್ಟಿಯನ್ನು ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು ತಮ್ಮ ಕಛೇರಿಯ ಸೂಚನಾ ಫಲಕ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಂಪನ್ಮೂಲ ಕೇಂದ್ರದ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ಈ ಬಗ್ಗೆ ಸ್ಥಳೀಯ ದಿನಪತ್ರಿಕೆ ಮತ್ತು ಮಾಧ್ಯಮದಲ್ಲಿ ವ್ಯಾಪಕ ಪ್ರಚಾರ ನೀಡಲು ಸೂಚಿಸಿದೆ. **ಈ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ 21-05-2007.**

ಈ ಪಟ್ಟಿಯಲ್ಲಿರುವ ಶಿಕ್ಷಕರು ಸೇವೆಗೆ ಸೇರಿದ ದಿನಾಂಕ, ನೇಮಕಾತಿ ವಿಧಾನ, ಗ್ರೇಡ್-2 ಗೆ ಬಂದ ದಿನಾಂಕದಲ್ಲಿ ಯಾವುದೇ ವ್ಯತ್ಯಾಸ ಮತ್ತು ಪಟ್ಟಿಯಲ್ಲಿ ಹೆಸರು ಇಲ್ಲದೇ ಇದ್ದಲ್ಲಿ ಸೂಕ್ತ ದಾಖಲೆಗಳೊಂದಿಗೆ ಲಿಖಿತ ಮೂಲಕ ಆಕ್ಷೇಪಣೆಯನ್ನು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು/ಕ್ಷೇತ್ರ ಶಿಕ್ಷಣಾದಿಕಾರಿಗಳ ಕಛೇರಿಗೆ ಸಲ್ಲಿಸಿ ಸ್ವೀಕೃತಿಯನ್ನು ಪಡೆಯಬಹುದು. ಈ ನಿಗಧಿತ ಅವಧಿ ನಂತರ ಬರುವ ಅಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಸ್ಪಷ್ಟವಾಗಿ ತಿಳಿಸಲಾಗಿದೆ.

**ಈ ನಿಗಧಿತ ಅವಧಿಯೊಳಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ/ಜಿಲ್ಲಾ ಉಪನಿರ್ದೇಶಕರ ಹಂತದಲ್ಲಿ ಸ್ವೀಕೃತವಾದ ಆಕ್ಷೇಪಣೆಗಳನ್ನು ಜಿಲ್ಲಾ ಉಪನಿರ್ದೇಶಕರ ಕಛೇರಿ ಹಂತದಲ್ಲಿ ದಿನಾಂಕ 28-05-2007 ರ ಒಳಗಾಗಿ ಕ್ರೂಢೀಕರಿಸಿ ಅಂತಿಮ ಪಟ್ಟಿಯಲ್ಲಿ ಮಾಡಬೇಕಾದ ತಿದ್ದುಪಡಿ ಮತ್ತು ಹೆಸರು ಬಿಟ್ಟುಹೋಗಿರುವ ಶಿಕ್ಷಕರ ಸಂಪೂರ್ಣ ಪಟ್ಟಿಯನ್ನು**

ಉಪನಿರ್ದೇಶಕರು ಸೂಕ್ತ ದೃಢೀಕರಣದೊಂದಿಗೆ ಸಂಬಂಧಿಸಿದ ಕಾರ್ಯನಿರ್ವಾಹಕರ ಮೂಲಕ ದಿನಾಂಕ 30-05-2007 ರಂದು ತಪ್ಪದೇ ಖುದ್ದಾಗಿ ನಿರ್ದೇಶಕರು (ಪ್ರೌಢ ಶಿಕ್ಷಣ) ಇವರಿಗೆ ಸಲ್ಲಿಸುವ ವ್ಯವಸ್ಥೆಯನ್ನು ಮಾಡಲು ಸೂಚಿಸಿದೆ.

ಅತಿ ಪ್ರಮುಖ ವಿಷಯವೆಂದರೆ ಯಾವುದೇ ಶಿಕ್ಷಕರ ಹೆಸರು ಬಿಟ್ಟು ಹೋಗದಂತೆ ನೋಡಿಕೊಳ್ಳುವ ಜವಾಬ್ದಾರಿ ಸಂಬಂಧಿಸಿದ ಆಯಾ ಜಿಲ್ಲಾ ಉಪನಿರ್ದೇಶಕರದ್ದೇ ಆಗಿರುತ್ತದೆ. ಆದ್ದರಿಂದ ಯಾವುದೇ ಕಾರಣಕ್ಕೂ ಯಾವುದೇ ಶಿಕ್ಷಕರ ಹೆಸರು ಬಿಟ್ಟು ಹೋಗದಂತೆ ಎಚ್ಚರಿಕೆ ವಹಿಸಲು ಮತ್ತು ಅಂತಿಮ ಜೇಷ್ಟತಾ ಪಟ್ಟಿ ಪ್ರಕಟಿಸಿದ ನಂತರ ಯಾವುದೇ ಶಿಕ್ಷಕರ ಹೆಸರು ಇನ್ನಿತರೆ ತಿದ್ದುಪಡಿಗಾಗಿ ಕೋರಿಕೆಗಳು ಸ್ವೀಕೃತವಾದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನೇ ನೇರ ಜವಾಬ್ದಾರರನ್ನಾಗಿಸಲಾಗುವುದು.

ಜೇಷ್ಟತಾ ಪಟ್ಟಿಯನ್ನು ಇಲಾಖೆಯ ವೆಬ್ ಸೈಟ್ www. School education.kar.nic.in. ನಲ್ಲಿಯೂ ಸಹ ನೋಡಬಹುದು. ಜಿಲ್ಲಾ ಉಪನಿರ್ದೇಶಕರ ಕಛೇರಿ ಉಪಯೋಗಕ್ಕಾಗಿ ಒಂದು ಹಾರ್ಡ್ ಕಾಪಿ + ಸಿ.ಡಿ.ಯನ್ನು ನೀಡಲಾಗಿದೆ, ಅದನ್ನು ಬಳಸಿಕೊಳ್ಳಲು ಸೂಚಿಸಿದೆ.

(ಚಿದ್ರೆ ಶಂಕರಯ್ಯ ಸ್ವಾಮಿ) 30/4
ನಿರ್ದೇಶಕರು (ಪ್ರೌಢ ಶಿಕ್ಷಣ)

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಅಗತ್ಯ ಕ್ರಮಕ್ಕಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಜಿಲ್ಲಾ ಉಪನಿರ್ದೇಶಕರ ಮೂಲಕ

ಪ್ರತಿ:-

1) ಗೌರವಗಳೊಂದಿಗೆ ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಿದೆ.
2) ಮಾನ್ಯ ಆಯುಕ್ತರ ಅಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ
3) ಸಹ ನಿರ್ದೇಶಕರು (ಆಡಳಿತ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮಾಹಿತಿಗಾಗಿ
4) ಅಧ್ಯಕರು/ಪ್ರಧಾನ ಕಾರ್ಯದಶಿಗಳು, ಕರ್ನಾಟಕ ರಾಜ್ಯ ಪ್ರೌಡ ಶಾಲಾ ಸಹ ಶಿಕ್ಷಕರ ಸಂಘ(ರಿ), ದೇವಸಂದ್ರ, ಕೆ. ಆರ್. ಪುರಂ. ಬೆಂಗಳೂರು-36. ಇವರಿಗೆ ಕಳುಹಿಸುತ್ತಾ ಎಲ್ಲಾ ಶಿಕ್ಷಕರ ಗಮನಕ್ಕೆ ತರಲು ಸೂಚಿಸಿದೆ.
5) ಕಛೇರಿ ಪ್ರತಿ.

covering letter.doc